**<u>ಸಾಕ್ಷಿಗೆ ದಿನಾಂಕಃ 23.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.NGB ರವರಿಂದಃ</u>**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**3** ಎಂದು, ವಾಹನ ಅಮಾನತ್ತು ಪಂಚನಾಮೆಯನ್ನು ನಿ.ಪಿ.**4** ಎಂದು, ಐಎಂವಿ ವರದಿಯನ್ನು ನಿ.ಪಿ.**5** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**6** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**7** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.7 ಎಂದು ಗುರುತು ಆಗಿರುವ ದಾಖಲೆಗಳು ಹೊಸಕೋಟೆ ಸಂಚಾರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

3) **ಡಿಸ್ಚಾರ್ಜ್ ಸಮ್ಮರಿಗಳನ್ನು** ನಿ.ಪಿ.**8** ಮತ್ತು ನಿ.ಪಿ.**9** ಎಂದು ಗುರುತಿಸಿದೆ.

4) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**10** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) ಒಟ್ಟು **21** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**11** ಎಂದು ಗುರುತಿಸಿದೆ.

6) ಒಟ್ಟು **21 Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**12** ಎಂದು ಗುರುತಿಸಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.